ಸಿ. ಸಿ. ನಂ.- 286/2024

ಸಿ.ಡಬ್ಲ್ಯೂ- 21 / ಪಿ.ಡಬ್ಲ್ಯೂ- 9

1 ನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ. ದ. ನ್ಯಾ ದಂ.ಗಳ ನ್ಯಾಯಾಲಯ, ಹೊಸಪೇಟೆ.

ಸಾಕ್ಷಿಯನ್ನು ದಿನಾಂಕ 29-12-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿ ಹೆಸರು - | ಟಿ ಕೆ ಕೇಶವಮೂರ್ತಿ |
| ತಂದೆಯ ಹೆಸರು - | ಟಿ ಕೋದಂಡರಾವ್ |
| ವಯಸ್ಸು - | 59 ವರ್ಷಗಳು |
| ಉದ್ಯೋಗ - | ನಿವೃತ್ತ ಪಿ ಎಸ್ ಐ |
| ವಾಸಸ್ಥಳ - | ಹೊಸಪೇಟೆ |

ಮುಖ್ಯ ವಿಚಾರಣೆ-ಮಾನ್ಯ ಎ. ಪಿ. ಪಿ. ಅವರಿಂದ

ನಾನು ದಿಃ26.09.2023 ರಿಂದ 2024 ನೇ ಇಸವಿವರೆಗೆ ನಾನು ಪಿ ಎಸ್ ಐ ಆಗಿ ಸಂಚಾರ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ- 28.12.2023 ರಂದು ನಾನು ಠಾಣೆಯಲ್ಲಿದ್ದಾಗ ಚಾಸಾ.1 ರವರು ಬೆಳಿಗ್ಗೆ 8.00 ಗಂಟೆಗೆ ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರಿನ ಆಧಾರದ ಮೇಲೆ ನಮ್ಮ ಠಾಣೆ ಗುನ್ನೆ ನಂಃ 72/2023 ರಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರ.ವ.ವ ಯನ್ನು ತಯಾರಿಸಿ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ನಂತರ ಮೃತನ ಶವ ತನಿಖಾ ಪಂಚನಾಮೆ ಜರುಗಿಸಲು ಬಳ್ಳಾರಿ ವಿಮ್ಸ ಆಸ್ಪತ್ರೆಗೆ ಚಾಸಾ.20 ರವರನ್ನು ಕಳುಹಿಸಿಕೊಟ್ಟಿರುತ್ತೇನೆ. ದಿಃ 29.12.2023 ರಂದು ನಾನು ಚಾಸಾ.7 ಮತ್ತು 8 ರವರ ಸಮಕ್ಷಮ ಸ್ಥಳ ಪಂಚನಾಮೆ ಜರುಗಿಸಿರುತ್ತೇನೆ. ನಂತರ ಠಾಣೆಯಲ್ಲಿ ವಾಹನದ ಜಪ್ತಿ ಪಂಚನಾಮೆ ಜರುಗಿಸಿರುತ್ತೇನೆ, ಹಾಗೂ ಅದರ ಪಿ ಎಫ್ ನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ.22 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿ ನಿಪಿ-1 ದೂರಿನಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-16 ಎಂದು, ಸಾಕ್ಷಿಯ ಸಹಿಯನ್ನು ನಿಪಿ-16(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಚಾಸಾ.20 ರವರಿಗೆ ನೀಡಿದ ಜ್ಞಾಪನ ನೋಡಿ ಗುರುತಿಸಿದ್ದು, ಅದನ್ನು ನಿಪಿ-17 ಎಂದು, ಸಾಕ್ಷಿಯ ಸಹಿಯನ್ನು ನಿಪಿ-17(ಎ) ಎಂದು ಗುರುತಿಸಲಾಯಿತು. ಚಾಸಾ.20 ರವರು ಶವ ತನಿಖಾ ಪಂಚನಾಮೆ ಜರುಗಿಸಿ, ತಮಗೆ ನೀಡಿದ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-18 ಎಂದು, ಸಾಕ್ಷಿಯ ಸಹಿಯನ್ನು ನಿಪಿ-18(ಎ) ಎಂದು ಗುರುತಿಸಲಾಯಿತು.ಸಾಕ್ಷಿ ನಿಪಿ-2 ಪಂಚನಾಮೆಯಲ್ಲಿರುವ ತನ್ನ ಸಹಿ ನೋಡಿ

ಗುರುತಿಸಿದ್ದು, ಅದನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3 ಕಚ್ಚಾ ನಕಾಶೆಯಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-3(ಡಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-4 ಮತ್ತು 5 ಭಾವಚಿತ್ರಗಳನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ನಿಪಿ-6 ಜಪ್ತಿ ಪಂಚನಾಮೆಯಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-6(ಶಿ) ಎಂದು ಗುರುತಿಸಲಾಯಿತು.

<u>ಪಾಟೀಸವಾಲು- ಆರೋಪಿತರ ಪರ ವಕೀಲರಾದ ಶ್ರೀ ಜಿ ಎಸ್ ಆರ್ ರವರಿಂದ-</u>

ನಿಪಿ-1 ದೂರನ್ನು ಸ್ವೀಕರಿಸುವ ಸಮಯದಲ್ಲಿ ಮೃತ ವ್ಯಕ್ತಿಯ ಬಳಿ ಚಾಲನಾ ಪರವಾನಿಗೆ ಇತ್ತೋ ಇಲ್ಲವೋ ಎಂಬ ಬಗ್ಗೆ ನಾನು ವಿಚಾರಿಸಿರುವುದಿಲ್ಲ. ಅದೇ ರೀತಿ ದೂರನ್ನು ಪಡೆಯುವಾಗ ಮೋಟಾರ್ ಸೈಕಲ್ ನ ಚಾಲಕ ಮತ್ತು ಹಿಂಬದಿ ಸವಾರ ಹೆಲ್ಮೆಟ್ ಧರಿಸಿದ ಬಗ್ಗೆ ವಿಚಾರಿಸಲಿಲ್ಲ. ದೂರಿನಲ್ಲಿ ಸಹ ಅವರು ಹೆಲ್ಮೆಟ್ ಧರಿಸಿರುವ ಬಗ್ಗೆ ನಮೂದು ಇಲ್ಲ ಎಂದರೆ ಸರಿ. ಘಟನಾ ಸ್ಥಳ ಹೊಸಪೇಟೆಯಿಂದ ಅನಂತಶಯನಗುಡಿ ದಾಟಿ ಕೊಂಡನಾಯಕನಹಳ್ಳಿಗೆ ಹೋಗುವ ರಸ್ತೆಯ ಸಂಪೂರ್ಣ ಎಡಬದಿಯಲ್ಲಿ ಇರುತ್ತದೆ ಎಂದರೆ ಸರಿ. ಸದರಿ ಅಪಘಾತ ಮೃತ ವ್ಯಕ್ತಿಯ ತಪ್ಪಿನಿಂದ ಆಗಿದ್ದರೂ ಸಹ ಅವನ ಕುಟುಂಬಕ್ಕೆ ಪರಿಹಾರ ಧನ ಕೊಡಿಸುವ ಸಲುವಾಗಿ ಸುಳ್ಳು ದೂರು ಪಡೆದು, ಆರೋಪಿ ವಿರುದ್ಧ ಸುಳ್ಳು ಭಾಗಶಃ ತನಿಖೆ ನಡೆಸಿರುತ್ತೇನೆ ಎಂದರೆ ಸರಿಯಲ್ಲ. ಪಂಚನಾಮೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಠಾಣೆಯಲ್ಲಿ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಈ ಪಂಚನಾಮೆಗಳನ್ನು ಪಂಚರ ಸಮಕ್ಷಮ ಸ್ಥಳದಲ್ಲಿ ಜರುಗಿಸಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ಜಪ್ತಿ ಪಡಿಸಿಕೊಂಡ ಎರಡು ವಾಹನಗಳು ಒಂದಕ್ಕೊಂದು ಎದುರುಗಡೆಯಿಂದ ಡಿಕ್ಕಿ ಹೊಡೆದಾಗ ಆಗುವ ಜಖಂಗಳನ್ನು ಹೊಂದಿರುತ್ತವೆ ಎಂದರೆ ಸರಿ. ಸದರಿ ಅಪಘಾತ ಆರೋಪಿಯ ಅಜಾಗರೂಕತೆಯಿಂದ ಆಗಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ- ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ.

ಸಹಿ/-

1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ.ಗಳು, ವಿಜಯನಗರ ಜಿಲ್ಲೆ, ಹೊಸಪೇಟೆ.